# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 278 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 06.12.2023 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದ ಬಹುತೇಕ ಪ್ರಮುಖ ನಗರಗಳ ರಸ್ತೆಗಳು ತುಂಬಾ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿವೆಯೇ; ಹದಗೆಟ್ಟಿರುವ ರಸ್ತೆಗಳ ಅಭಿವೃದ್ಧಿಗೆ ತೆಗೆದುಕೊಂಡ ಕ್ರಮಗಳೇನು; | ರಾಜ್ಯದ ಬಹುತೇಕ ಪ್ರಮುಖ ನಗರಗಳಲ್ಲಿ ಹಾದುಹೋಗಿರುವ ಲೋಕೋಪಯೋಗಿ ರಸ್ತೆಗಳನ್ನು ವಿವಿಧ ಲೆಕ್ಕ ಶೀರ್ಷಿಕೆಯಡಿ ಲಭ್ಯತೆವಿರುವ ಅನುದಾನದಲ್ಲಿ ಅಭಿವೃದ್ಧಿ ಮತ್ತು ನಿರ್ವಹಣೆ ಕಾಮಗಾರಿಯನ್ನು ಕೈಗೊಂಡು ಸಂಚಾರ ಯೋಗ್ಯವಾಗಿರಿಸಲಾಗಿರುತ್ತದೆ.<br><br>ಮುಂದುವರೆದು, ನಗರಗಳ ಪರಿಮಿತಿಯಲ್ಲಿ ಬರುವ ಲೋಕೋಪಯೋಗಿ ಇಲಾಖೆಯ ರಸ್ತೆಗಳನ್ನು ಹೊರತುಪಡಿಸಿ ಇತರೆ ರಸ್ತೆಗಳು ಆಯಾ ಸ್ಥಳೀಯ ಪ್ರಾಧಿಕಾರದ ವ್ಯಾಪ್ತಿಯಲ್ಲಿರುತ್ತವೆ. |
| ಆ) | ಜಿಲ್ಲಾ ಕೇಂದ್ರಗಳ ಮತ್ತು ತಾಲ್ಲೂಕು ಕೇಂದ್ರಗಳಲ್ಲಿಯು ರಸ್ತೆ ಅಭಿವೃದ್ಧಿಯಾಗದೇ ವರ್ಷಗಳೇ ಕಳೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಜಿಲ್ಲಾ ಕೇಂದ್ರಗಳು ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಹಾದುಹೋಗಿರುವ ಲೋಕೋಪಯೋಗಿ ಇಲಾಖೆಯ ರಸ್ತೆಗಳನ್ನು ಲಭ್ಯವಿರುವ ಅನುದಾನದಲ್ಲಿ ಕಾಲಕಾಲಕ್ಕೆ ಅಭಿವೃದ್ಧಿ ಮತ್ತು ನಿರ್ವಹಣೆ ಮಾಡಿ ವಾಹನ ಸಂಚಾರಕ್ಕೆ ಯೋಗ್ಯವಾಗಿರಿಸಲಾಗಿರುತ್ತದೆ. |
| ಇ) | ರಸ್ತೆ ಗುಂಡಿಗಳು ವಾಹನ ಸವಾರರಿಗೆ ತೀವ್ರ ಸಂಕಷ್ಟ ತಂದೊಡ್ಡುತ್ತಿದ್ದು ಅನೇಕ ಅಪಘಾತಗಳಿಗೆ ಕಾರಣವಾಗಿದ್ದು, ಇದಕ್ಕೆ ಶಾಶ್ವತ ಪರಿಹಾರವೇನು; | ನಗರ ಪ್ರದೇಶದಲ್ಲಿ ಹಾದುಹೋಗಿರುವ ಲೋಕೋಪಯೋಗಿ ಇಲಾಖೆಯ ರಸ್ತೆಗಳಲ್ಲಿ ಅಪಘಾತಗಳಾಗಿರುವ ಬಗ್ಗೆ ವರದಿಯಾಗಿರುವುದಿಲ್ಲ. |
| ಈ) | ಕಳೆದ ವರ್ಷಗಳಿಂದ ರಾಜ್ಯದ ವಿವಿಧ ಮೇಲ್ಸೇತುವೆ, ಸೇತುವೆ ಮತ್ತು ಅಂಡರ್ ಪಾಸ್‌ಗಳಿಗೆ ಖರ್ಚು ಮಾಡಿದ ಹಣವೆಷು? (ಸಂಪೂರ್ಣ ವಿವರ ನೀಡುವುದು) | 2022–23ನೇ ಸಾಲಿನಿಂದ ರಾಜ್ಯದ ವಿವಿಧ ಮೇಲ್ಸೇತುವೆ, ಸೇತುವೆ ಮತ್ತು ಅಂಡರ್ ಪಾಸ್‌ಗಳ ನಿರ್ಮಾಣಕ್ಕೆ ಖರ್ಚು ಮಾಡಿದ ಮೊತ್ತದ ವಿವರಗಳು ಈ ಕೆಳಕಂಡಂತಿದೆ: |

| ವಲಯ | ರಾಜ್ಯ ಹೆದ್ದಾರಿ ಸೇತುವೆಗಳ (ರೂ.ಕೋಟಿಗಳಲ್ಲಿ) | ಜಿಲ್ಲಾ ಮುಖ್ಯ ರಸ್ತೆ ಸೇತುವೆಗಳ (ರೂ ಕೋಟಿಗಳಲ್ಲಿ) | ಒಟ್ಟು (ರೂ.ಕೋಟಿಗಳಲ್ಲಿ) |
|---|---|---|---|
| ದಕ್ಷಿಣ | 8.16 | 34.94 | 43.10 |
| ಉತ್ತರ | 10.63 | 53.82 | 64.45 |
| ಈಶಾನ್ಯ | 16.94 | 15.94 | 32.89 |
| ಕೇಂದ್ರ | 8.06 | 80.11 | 88.17 |
| ರಾಷ್ಟ್ರೀಯ ಹೆದ್ದಾರಿ | 623.74 | | |

ಲೋಇ 55 ಸಿಕ್ಯೂಎನ್ 2023(ಇ)

(ಸತೀಶ ಜಾರಕಿಹೊಳಿ)
ಲೋಕೋಪಯೋಗಿ ಸಚಿವರು

**ಸತೀಶ ಜಾರಕಿಹೊಳಿ**
**ಲೋಕೋಪಯೋಗಿ ಸಚಿವರು**